ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

# ಮೇಲ್ಮನೆಯಲ್ಲಿ ಮೊಬೈಲ್ ನಿಷೇಧ: ಹೊರಟ್ಟಿ

ಪ್ರಜಾವಾಣಿ ವಾರ್ತೆ [illegible]



ಬೆಂಗಳೂರು: ವಿಧಾನಪರಿಷತ್ತಿನ ಒಳಗೆ ಮೊಬೈಲ್ ಫೋನ್‌ಗಳನ್ನು ತರುವುದಕ್ಕೆ ನಿಷೇಧ ವಿಧಿಸುವುದೂ ಸೇರಿ ಕೆಲವು ಕಟ್ಟುನಿಟ್ಟಿನ ನಿಯಮಾವಳಿಗಳನ್ನು ಜಾರಿಗೆ ತರಲಾಗುವುದು ಎಂದು ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

'ಸುದ್ದಿವಾಹಿನಿಗಳ ಕ್ಯಾಮೆರಾಗಳ ಪ್ರವೇಶಕ್ಕೆ ನಿರ್ಬಂಧ ಇರುವುದಿಲ್ಲ. ಆದರೆ, ಅವರು ವಿವೇಕ ಮತ್ತು ವಿವೇಚನೆಯಿಂದ ಕಾರ್ಯನಿರ್ವಹಿಸಬೇಕು' ಎಂದು ಅವರು ಸುದ್ದಿಗೋಷ್ಠಿಯಲ್ಲಿ ಮನವಿ ಮಾಡಿದರು.

'ಕೆಲವು ಸಣ್ಣ ಪುಟ್ಟ ಘಟನೆಗಳನ್ನೇ ದೊಡ್ಡದಾಗಿ ಇಡೀ ದಿನ ಟಿ.ವಿಗಳಲ್ಲಿ ತೋರಿಸಲಾಗುತ್ತದೆ. ಸದನದಲ್ಲಿ ಸಾಕಷ್ಟು ಜ್ವಲಂತ ಸಮಸ್ಯೆಗಳ ಬಗ್ಗೆ ಗಂಭೀರ ಚರ್ಚೆ ನಡೆಸಿದರೂ ಅದರ ಬಗ್ಗೆ ಯಾವುದೇ ಮಾಹಿತಿ ನೀಡುವುದಿಲ್ಲ. ಸಣ್ಣ ಪುಟ್ಟ ತಪ್ಪುಗಳು ಆಗುತ್ತವೆ. ಆ ಬಗ್ಗೆ ಎಚ್ಚರಿಕೆ ನೀಡುವುದು ಮಾಧ್ಯಮಗಳ ಕರ್ತವ್ಯ ಎಂಬುದರಲ್ಲಿ ಎರಡು ಮಾತಿಲ್ಲ. ಆದರೆ, ಇಡೀ ಸದನವೇ ಸರಿಯಾಗಿ ನಡೆಯುತ್ತಿಲ್ಲ ಎಂಬಂತೆ ಬಿಂಬಿಸುವುದು ಸರಿಯಲ್ಲ' ಎಂದು ಹೊರಟ್ಟಿ ಹೇಳಿದರು.

ಹೀಗೆಂದ ಮಾತ್ರಕ್ಕೆ ಮಾಧ್ಯಮವನ್ನು ದೂರ ಇಡುವುದೂ ಇಲ್ಲ, ನಿಷೇಧ ವಿಧಿಸುವುದಿಲ್ಲ. ಹೆಚ್ಚು ಸ್ವಯಂ ನಿಯಂತ್ರಣ ಮತ್ತು ವಿವೇಕದಿಂದ ಕಾರ್ಯನಿರ್ವಹಿಸಬೇಕು ಎಂಬುದಷ್ಟೇ ನಮ್ಮ ಕಾಳಜಿ. ಕೆಲವು ಸದಸ್ಯರಿಗೆ ಮಧ್ಯಾಹ್ನ ಊಟ ಮಾಡಿ ಬಂದ ನಂತರ ವಯೋ ಸಹಜವಾಗಿ, ನಿದ್ದೆ ಅಥವಾ ತೂಕಡಿಕೆ ಬರುತ್ತದೆ. ಅದನ್ನು ಲಘುವಾಗಿ ತೋರಿಸಲಾಗುತ್ತದೆ ಎಂದು ಬೇಸರಿಸಿದರು.

ವಿಧಾನಪರಿಷತ್ ಅಧಿವೇಶನವೂ ಮಾ.4 ರಿಂದಲೇ ನಡೆಯುತ್ತದೆ. ಆದರೆ 'ಒಂದು ದೇಶ ಮತ್ತು ಒಂದು ಚುನಾವಣೆ' ವಿಚಾರವಾಗಿ ಚರ್ಚೆ ನಡೆಸುವ ಸಂಬಂಧ ಸರ್ಕಾರದಿಂದ ಯಾವುದೇ ಮಾಹಿತಿ ಬಂದಿಲ್ಲ. ನಾವು ಪ್ರಶ್ನೋತ್ತರ ಮತ್ತು ಇತರ ಕಲಾಪಗಳನ್ನು ನಡೆಸಲು ತೀರ್ಮಾನಿಸಿದ್ದೇವೆ ಎಂದು ಹೊರಟ್ಟಿ ಹೇಳಿದರು.

## 'ಮೀಸಲಾತಿಗೆ ಬಡತನವೇ ಮಾನದಂಡವಾಗಲಿ'

ಇಂದಿನ ದಿನಗಳಲ್ಲಿ ಕುಟುಂಬಗಳ ಆರ್ಥಿಕ ವ್ಯವಸ್ಥೆಯನ್ನು ನೋಡಿ ಮೀಸಲಾತಿ ನಿಗದಿ ಮಾಡಬೇಕು. ಆಗ ಎಲ್ಲ ಸಮುದಾಯಗಳ ಬಡವರಿಗೂ ನ್ಯಾಯ ಸಿಗುತ್ತದೆ ಎಂದು ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಸ್ವಾಮೀಜಿಗಳು ಬೀದಿಗಿಳಿದು ಹೋರಾಟ ಮಾಡುತ್ತಿರುವ ಬಗ್ಗೆ ಯಾವುದೇ ಅಭಿಪ್ರಾಯ ವ್ಯಕ್ತಪಡಿಸುವುದಿಲ್ಲ. ಅವರು (ಮಠಾಧೀಶರು) ದೊಡ್ಡವರು, ಅವರ ಬಗ್ಗೆ ಮಾತನಾಡದೇ ಇರುವುದೇ ಒಳ್ಳೆಯದು ಎಂದರು.

ರಾಜ್ಯದಲ್ಲಿ 1.38 ಕೋಟಿ ಬಿಪಿಎಲ್ ಕಾರ್ಡ್‌ದಾರರು ಇದ್ದಾರೆ. ಆದರೆ ಅಷ್ಟೂ ಜನ ಕಡುಬಡವರು ಎಂದು ಹೇಳಲು ಆಗಲ್ಲ. 50 ಲಕ್ಷ ಜನ ಕಡುಬಡವರು ಇರಬಹುದು. ಅವರಿಗೆ ನ್ಯಾಯ ಸಿಗಬೇಕು. ಮೀಸಲಾತಿಗೆ ಬಡತನವೇ ಅಳತೆಗೋಲಾಗಬೇಕು ಎಂದು ಅವರು ಪ್ರತಿಪಾದಿಸಿದರು.